ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕೋವಿಡ್ ಹಿನ್ನಲೆಯಲ್ಲಿ ಖರೀದಿಸಲಾದ ಉಪಕರಣಗಳ ಕುರಿತು

ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು ):-

883 (961) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್-19ರ ಹಿನ್ನಲೆಯಲ್ಲಿ ಸರ್ಕಾರವು ಸೋಂಕಿತರ ಚಿಕಿತ್ಸೆಗಾಗಿ ತುರ್ತಾಗಿ ಆರೋಗ್ಯ ಉಪಕರಣಗಳನ್ನು ಖರೀದಿಸಿದೆಯೇ;

(ಆ) ಖರೀದಿಸಿದ್ದಲ್ಲಿ, ಯಾವ ಯಾವ ಉಪಕರಣಗಳನ್ನು ಖರೀದಿಸಲಾಗಿದೆ; ಇದಕ್ಕಾಗಿ ಖರ್ಚು ಮಾಡಲಾದ ಮೊತ್ತವೆಷ್ಟು; ಈ ಪೈಕಿ ಕೇಂದ್ರ ಸರ್ಕಾರದ ಅನುದಾನವೆಷ್ಟು; ಮತ್ತು ರಾಜ್ಯ ಸರ್ಕಾರದ ಅನುದಾನವೆಷ್ಟು; (ಖರೀದಿಸಲಾದ ಉಪಕರಣಗಳ ಮಾಹಿತಿ ಒದಗಿಸುವುದು)

(ಇ) ಖರೀದಿಸಲಾದ ಉಪಕರಣಗಳನ್ನು ಕೆಲವು ಕಳಪೆ ಗುಣಮಟ್ಟದಿಂದ ಕೂಡಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?